(ಈ) ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕ,1997 ಮಂಡನೆಗೆ ಅನುಮತಿ ಕೋರಿಕೆ

*ಅನುಬಂಧ-IV

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"1997ರ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು: ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು *ವಿಧೇಯಕವನ್ನು ಮಂಡಿಸಲಾಗಿದೆ*.

(ಉ) ಕರ್ನಾಟಕ ಹೆದ್ದಾರಿಗಳ (ತಿದ್ದುಪಡಿ) ವಿಧೇಯಕ, 1997 ಮಂಡನೆಗೆ ಅನುಮತಿ ಕೋರಿಕೆ

*ಅನುಬಂಧ-V

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಹೆದ್ದಾರಿಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"1997ರ ಕರ್ನಾಟಕ ಹೆದ್ದಾರಿಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು